ಹಾಸನ ಡಿಸ್ಟ್ರಿಕ್ಟ್.

ಇಸ್ತಿ ಹಾರ್ ನಾಮೆ.

ತಾರೀಖು 30ನೇ ಏಪ್ರಿಲ್ 1896.

ನಂ. 1. ಸಕಲಜನಗಳಿಗೂ ತಿಳಿಯುವ ಬಗ್ಗೆ ಇದರಿಂದ ಪ್ರಕಟಿಸಲ್ಪಡುವದೇನಂದರೆ, (ಇದರಡಿ ಕಂಡ ತಖ್ತೆಯಲ್ಲಿ ನಮೂದಿಸಿದ ಪ್ರಕಾರ) ಜೋಡಿದಾರರಿಂದ ಸರಕಾರಕ್ಕೆ ಸಲ್ಲತಕ್ಕ ಕಂದಾಯದ ಬಾಕಿ ಸಮಾಧಾನಕ್ಕೋಸ್ಕರ ಕ್ರಮ ಪ್ರಕಾರ ಜಪ್ತಿ ಮಾಡಲ್ಪಟ್ಟಿರುವ ಈ ಕೆಳಗೆ ಕಂಡ ಜೋಡೀ ಗ್ರಾಮವು ಇದರಡಿ ಕಂಡ ತಖ್ತೆಯಲ್ಲಿ ನಮೂದಿರುವ ಸ್ಥಳದಲ್ಲೂ ವ ತಾರೀಖಿನಲ್ಲೂ ಬಹಿರಂಗವಾದ ಹರಾಜು ಮೂಲಕ ವಿಕ್ರಯಿಸಲ್ಪಡುವದು ಮತ್ತು ಸದರೀ ತಾರೀಖಿನಲ್ಲಿ ಬೆಳಿಗ್ಗೆ 11 ಘಂಟೆಗೆ ಹರಾಜು ಪುರುವಾಗಿ ಉಳಿಕೆಯಾವದೂ ಇಲ್ಲದೆ ಗ್ರಾಮವು ಚಡದರಖಾಸ್ತುದಾರರಿಗೆ ಹರಾಜ್ ನಿಲ್ಲುವದು.

2. ಪರಂತು, ಒಂದು ಗ್ರಾಮವು ಬೇರೆಬೇರೆಯಾಗಿ ಮಂಜೂರ್ಮಾಡಲ್ಪಟ್ಟ ವೃತ್ತಿಗಳಾಗಿ ವಿಂಗಡಿಸಲ್ಪಟ್ಟಿದ್ದರೆ, ಡೆಪ್ಯುಟಿ ಕಮ್ಮಿಷನರವರು ತಮ್ಮ ಯಖ್ತ್ಯಾರ್ ಮೇಲೆ ಪೂರಾ ಗ್ರಾಮಗಳನ್ನು ವಿಕ್ರಯಿಸುವದಕ್ಕೆ ಬದಲಾಗಿ ಪ್ರತಿ ಒಂದು ವೃತ್ತಿಯನ್ನೂ ಬೇರೆಬೇರೆಯಾಗಿ ಹರಾಜು ಹೂಕಿಸುವರು.

3. ಕ್ರಯದಾರರು ಹರಾಜ್ ಕಾಲದಲ್ಲಿ ಕ್ರಯದ ಮೊಬಲಗ್ ಪೈಕಿ ಕೇಕಡಾ 25 ರೂಪಾಯಿ ಡಿಪಾಜಿಟ್ ಇಡಬೇಕಾಗಿರುತ್ತೆ. ಕ್ರಯದ ಮೊಬಲಗ್ ಪೈಕಿ ಬಾಕಿಯನ್ನು ಹರಾಜು ತಾರೀಖು ಲಾಗಾಯಿತು 15 ದಿನಗಳೊಳಗಾಗಿ ಪಾವತಿ ಮಾಡದೆ ಇದ್ದರೆ, ಡಿಪಾಜಿಟ್ ಮೊಬಲಗು ದಂಡೆವಾಗಿ ತೆಗದುಕೊಳ್ಳಲಿಕ್ಕೆ ಗುರಿಯಾಗತಕ್ಕದ್ದು.

4. ಅಂಥಾ ಡಿಪಾಜಿಟ್ ಮೊಬಲಗನ್ನು ಕೊಡದೆ ಹೋದರೆ, ಅಥವಾ ಬಾಕಿ ಕ್ರಯದ ಮೊಬಲಗನ್ನು ಪಾವತಿ ಮಾಡದಿದ್ದರೆ ಜಮೀನುಗಳು ಅವ್ವಲ್ ಕ್ರಯದಾರನ ಖರ್ಚಿನಲ್ಲಿ ಪುನಃ ಹರಾಜು ಕೂಕಲ್ಪಡುವವು.

5. ಹರಾಜಿನಲ್ಲಿ ದರಖಾಸ್ತು ಮಾಡತಕ್ಕವರು ತಮ್ಮ ಸ್ವಂತಕ್ಕೆ ದರಖಾಸ್ತು ಮಾಡುತ್ತಾರೆಯೋ, ಯಾ ಮುತಾಲೀಕರಾರ ತರೀಕ ದರಖಾಸ್ತು ಮಾಡುತ್ತಾರೆಯೋ ಎಂಬದನ್ನು ನಮೂದಿಸತಕ್ಕದ್ದು. ಮುತಾಲೀಕರಾಗಿದ್ದ ಪಕ್ಷಕ್ಕೆ, ತಮ್ಮ ಮುಖ್ಯಸ್ಥರಿಂದ ರುಜುಮಾಡಲ್ಪಟ್ಟ ಬರವಣಿಗೆ ಮೂಲಕವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡತಕ್ಕದ್ದು. ಹಾಗಿಲ್ಲದ ಪಕ್ಷಕ್ಕೆ ಅಂಥವರ ದರಖಾಸ್ತು ತಿರಸ್ಕರಿಸಲ್ಪಡಬಹುದು.

6. ಸರ್ಕಾರದ ಹಣ ಕೊಡಲಿಕ್ಕೆ ತಪ್ಪಿದ ಮನುಷ್ಯನಾಗಲಿ, ಅವನ ತರಫಿನಲ್ಲಿ ಕೆಲಸ ನಡಿಸುವ ಅಥವಾ ಜಮೀನಿನಲ್ಲಿ ತನಗೆ ಹಕ್ಕುಂಟೆಂಬ ಇತರ ಯಾವ ಮನುಷ್ಯನಾಗಲಿ, ಹರಾಜು ಆಗುವದಕ್ಕೆ ಮುಂಚಿತವಾಗಿ ಬಡ್ಡಿ ಯಾ ಇತರ ಖರ್ಚುಗಳು ದೇಖೀಲ್ ಕಂದಾಯದ ಬಾಕಿ ಮೊಬಲಗನ್ನು ಪೂರಾ ಹಾಜರ್ಮಾಡಿದಾಗ್ಯೂ ಅಥವಾ ಹಿಂದಿನ ಕಂದಾಯದ ಬಾಕಿ ಮುಂಶಾದ್ದು ಖಾವತಿಯಾಗಿರುತ್ತೆಂದು ತೃಪ್ತಿಕರವಾಗಿ ರುಜುವಾತು ಮಾಡಿದಾಗ್ಯೂ ಹರಾಜ್ ಮುಕ್ತಾಯ ಮಾಡಲ್ಪಡತಕ್ಕದ್ದು.

7. ಡೆಪ್ಯುಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ಪರ್ಯಂತ ಸ್ವತ್ತಿನ ಹರಾಜು ಖಾಯಮಾದ್ದಾಗಿರುವದಿಲ್ಲವು.

8. ಕ್ರಯದಾರನು ಕ್ರಯದ ಮೊಬಲಗನ್ನು ಪೂರ್ತಿಯಾಗಿ ಪಾವತಿಮಾಡಿ, ಹರಾಜನ್ನು ಡೆಪ್ಯುಟಿ ಕಮ್ಮಿಷನರವರು ಖಾಯಂ ಮಾಡಿದ ಕೂಡ್ಲೆ ಗ್ರಾಮವು ಆತನ ಸುಪರ್ದಿ ಮಾಡಲ್ಪಟ್ಟು, ಕ್ರಯದಾರನ ಹೆಸರಿನಲ್ಲಿ ರಿಜಿಸ್ಟರಿ ಮಾಡಲ್ಪಟ್ಟು, ಡೆಪ್ಯುಟಿ ಕಮ್ಮಿಷನರವರಿಂದ ರುಜು ಮೊಹರ್ ಮಾಡೋಣಾದ ಬಂದು ಸರ್ಟಿಫಿಕೇಟ್ ಆತನಿಗೆ ಕೊಡಲ್ಪಡುವದು. ತಪಶೀಲಿನಲ್ಲಾಗಲಿ ಅಂದಾಜಾ ಬೀಜವರ್ ವಿಷಯದಲ್ಲಾಗಲಿ ಇರುವ ಗಲ್ಲತ್ತುಗಳಿಗೆ ಸರ್ಕಾರದವರು ಜವಾಬ್ದಾರರಲ್ಲವೆಂದು ಸ್ಪಷ್ಟವಾಗಿ ತಿಳಿಯತಕ್ಕದ್ದು.

9. ಪರಂತು, ಸದರೀ ಹರಾಜಿನಿಂದ ನುಕ್ಸಾನು ಪಟ್ಟಂತೆ ಎಣಿಸುವ ಜನಗಳು ಹರಾಜು ಆದಿಂದ ವಿಧಾಯಕವಾದ ದಿನಗಳೊಳಗಾಗಿ ಡೆಪ್ಯುಟಿಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳಲಿಕ್ಕೆ ಸ್ವತಂತ್ರರಿರುತ್ತಾರೆ, ಅಂಥಾ ಅಪ್ಪೀಲ್‌ನಲ್ಲಿ ಆಗುವ ಅಖೈರ್ ಹುಕುಮಿಗೆ ಸದರೀ ಕ್ರಯವು ವಳಪಟ್ಟು ಇರುತ್ತೆ.

ತಾಲ್ಲೂಕು.	ಹೋಬಳಿ.	ಗ್ರಾಮ.	ಜೋಡೀ ಸಂಖ್ಯೆಯ ಹೆಸರು.	ಬಾಕಿದಾರರ ಹೆಸರು.	ಜಮೀನಿನ ನಂಬರು ಅಥವಾ ಹೆಸರು.	ಸ್ವತ್ತಿನ ವಿವರ. ತರಹ.	ಎಕರೆ.	ಆಕಾರ.	ಯಾವ ಬಾಕಿಗೋಸ್ಕರ ಗ್ರಾಮವು ಹರಾಜ್ ಮಾಡಲ್ಪಡುತ್ತೋ ಅಂಥಾ ಸರಕಾರದ ಕಂದಾಯದ ಬಾಕಿ.	ಹರಾಜು ಆಗಿರುವ ಮೊಬಲಗು.	ದೆಸೆ.
1	2	3	4	5	6	7	8	9	10	11	
							ಎಕರೆ. ಗುಂಟೆ.	ರೂ. ಆ. ಪೈ.	ರೂ. ಆ. ಪೈ.		
ಹಾಸನ.	ಬೇಲೂರು.	ಹಗರೆ.	ಜೋಡೀ ಸಂಖ್ಯೆ ಹಗರೆ.	1 ಬಾಗೀರತವ್ವ	½ ಮೈತ್ತಿ ¼	ತರೀ	136 32	96 3 9	ವಿಜಯಸಾಲ್ ಜೋಡಿ		15—6—1896ನೇ ಸೋಮವಾರ.
				2 ಗುರ್ರಾಯಾಚಾರಿ ವಗ್ಗೆರೆ	¼	ತರೀ	25 29	119 1 6	109 ಜಮು	3 5	
				3 ನಾರಣಾಚಾರಿ ಕೇಷವಾಚಾರಿ ವಗ್ಗೆರೆ	¼	ಬಂಜರ್	20 38	1 4 0	109	3 5	
				4 ಕೇಶವಾಚಾರ್	½	ಈ ಗ್ರಾಮದ 14ನೇ ನಂ. ವಗ್ಗೆರೆ ವೃತ್ತಿ ಈ ಪೈಕಿ ನಾರಣಾಚಾರ್	183 19	217 12 0	218	6 10	
				ಅನುಭವದಾರ್ ಅನಂತಾಚಾರ್ಯ ಕೇಶವಾಚಾರ್ಯ ಮಕ್ಕಳು ನಾರಣಾಚಾರ್ಯರು				11 0 0	9	1 0	
						ಫತ್ತೇಮಾರಿ			227	7 10	

ಎಸ್. ಅಮೀರ್‌ಹಸೇನ್,
ಫಾರ್ ಡೆಪ್ಯುಟಿ ಕಮ್ಮಿಷನರ್.